ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 6236/2023**

| | | |
|---|---|---|
| ಸಾಕ್ಷಿಯ ಹೆಸರುಃ | ಕೃಷ್ಣಮೂರ್ತಿ | ಪ್ರಾಸಾಃ 4 |
| ಗಂಡನ/ತಂದೆಯ ಹೆಸರುಃ | ಖಾದಿಗಪ್ಪ | ಚಾಸಾಃ 8 |
| ವಯಸ್ಸುಃ | 45 ವರ್ಷ | ದಿಃ 05-07-2025 |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಸೈದಾಪೂರ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ

ಚಾಸಾಃ 1 ನನ್ನ ತಂಗಿ. ನನಗೆ ಚಾಸಾಃ 4 ರಿಂದ 7 ರವರ ಪರಿಚಯವಿದೆ. ಆರೋಪಿ ನಂಬರ 1 ರವರ ಪರಿಚಯವಿಲ್ಲ. ಸದರಿ ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಯಾವ ದಿನಾಂಕದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸದರಿ ಪೋಲಿಸರು ನನಗೆ ಕರೆಸಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲವಾಗಿ ನುಡಿಯುತ್ತಿದ್ದುದರಿಂದ ಸರಕಾರಿ ಸಹಾಯಕ ಅಭಿಯೋಜಕರು ಪಾಟಿ ಸವಾಲಿಗಾಗಿ ಅವಕಾಶ ಕೋರಿದ್ದು ನ್ಯಾಯಾಲಯದ ಮುಂದಿರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

ದಿನಾಂಕಃ 03-10-2023 ರಂದು ಸದರಿ ಅಪಘಾತದಲ್ಲಿ ಮೃತ ತಿಮ್ಮಪ್ಪ ಇವರು ಮರಣ ಹೊಂದಿರುತ್ತಾರೆ ಎಂದರೆ ನನಗೆ ಮಾಹಿತಿ ಇಲ್ಲ. ನಾನು ಅಪಘಾತವನ್ನು ಕಣ್ಣಾರೆ ನೋಡಿರುವುದಿಲ್ಲ. ಈಗ ನಿಪಿ-6 ರಂತೆ ವಿವರವಾಗಿ ಓದಿ ಹೇಳಲಾದ ಹೇಳಿಕೆಯನ್ನು ನಾನು ಪೊಲಿಸರ ಮುಂದೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲು ಃಆರೋಪಿ ಪರ ವಕೀಲರಿಂದಃ ಇಲ್ಲ

ಮರುವಿಚಾರಣೆ ಃ ಇರುವುದಿಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ